**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.211/2025**

| | | |
|---|---|---|
| ಸಾಕ್ಷಿದಾರರ ಹೆಸರು | : ರೇಣುಕ | ಪ್ರಾಸಾ-1 |
| ಗಂಡನ ಹೆಸರು | : ಜಗದೀಶ್ ಎಸ್.ಜಿ | ಚಾಸಾ-1 |
| ವಯಸ್ಸು | : 49 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ. | ದಿನಾಂಕಃ 04.06.2025. |
| ವಾಸಸ್ಥಳ | : ಬಣಕಲ್ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು 2024 ರಿಂದ ಇಲ್ಲಿಯವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.24.10.2024 ರಂದು ನಾನು ಸಿಬ್ಬಂಧಿಗಳಾದ ಚಾಸಾ-5 ರಿಂದ 7 ರವರೊಂದಿಗೆ ಸಂಜೆ.6.00 ರ ಸಮಯದಲ್ಲಿ ಠಾಣಾ ವ್ಯಾಪ್ತಿಯ ಗಸ್ತಿನಲ್ಲಿಇದ್ದಾಗ ಬೆಟ್ಟಗೆರೆ ಗ್ರಾಮದ ಆರೋಪಿಯಾದ ಸುಂದರೇಶ್ ಬಿ.ಕೆ ರವರು ತಮ್ಮ ದಿನಸಿ ಅಂಗಡಿಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆಂಬ ಮಾಹಿತಿ ಮೇರೆಗೆ, ಬೈಟಗೆರೆ ಗ್ರಾಮಕ್ಕೆ ನಾವುಗಳು ಹೋಗಿ ದಾರಿಯಲ್ಲಿದ ಚಾಸಾ-2 ಮತ್ತು 3 ರವರಿಗೆ ವಿಷಯವನ್ನು ತಿಳಿಸಿ ಪಂಚರಾಗಿ ಹಾಜರಾಗಲು ಮನವಿ ಮಾಡಿಕೊಂಡ ಮೇರೆಗೆ ಅವರು ಒಪ್ಪಿದ್ದು, ಅವರಿಗೆ ನೋಟೀಸ್ ಜಾರಿ ಮಾಡಲಾಗಿರುತ್ತದೆ. ನಂತರ ನಾನು ಚಾಸಾ-5 ರಿಂದ 7 ಮತ್ತು ಪಂಚರಾದ ಚಾಸಾ-2 ಮತ್ತು 3 ರವರು ಆರೋಪಿಯಾದ ಸುಂದರೇಶ್ ಬಿ.ಕೆ ರವರ ದಿನಸಿ ಅಂಗಡಿಯ ಬಳಿ ಹೋಗಿ ನೋಡಲಾಗಿ, ಸದರಿಯವರು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಕಂಡು ಬಂದಿರುತ್ತದೆ. ತಕ್ಷಣ ಪರಿಶೀಲಿಸಿ ನೋಡಲಾಗಿ ಒಂದು ಚೀಲದಲ್ಲಿ 90 ಎಂ.ಎಲ್ ನ Captain Martin Whisky ಯ 34 ಪೌಚ್ ಗಳು ಕಂಡಬುಂದಿರುತ್ತದೆ. ಅವುಗಳ ಅಂದಾಜು ಬೆಲೆ ರೂ.1,360/- ಆಗಿರುತ್ತದೆ. ನಂತರ ಸ್ಥಳ ದಲ್ಲಿಯೇ ವರದಿಯನ್ನು ತಯಾರಿಸಿ, ನಮ್ಮ ಜೀಪ್ ಚಾಲಕರಾದ ಚಾಸಾ-8 ರವರ ಬಳಿ 90 ಎಂ.ಎಲ್ ನ Captain Martin Whisky ಯ 34 ಪೌಚ್‌ಗಳಿದ್ದ ಚೀಲವನ್ನು ಠಾಣೆಗೆ ಕಳುಹಿಸಿಕೊಡಲಾಗಿರುತ್ತದೆ.

ನಂತರ ಠಾಣೆ SHO ಕರ್ತವ್ಯದಲ್ಲಿದ್ದ ಚಾಸಾ-4 ರವರು ಪ್ರಕರಣವನ್ನು ಠಾಣಾ ಮೊ.ನಂ.67/2024 ರಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ನಮಗೆ ವಿಷಯವನ್ನು ತಿಳಿಸಿದ ಮೇರೆಗೆ ನಾವುಗಳು ಪ್ರಕರಣದ ತನಿಖೆಯನ್ನು ಮುಂದುವರೆಸಿ ನಮ್ಮ ಜೊತೆಯಲ್ಲಿ ಪಂಚರಾಗಿ ಹಾಜರಿದ್ದ ಚಾಸಾ-2 ಮತ್ತು 3 ರವರ ಸಮಕ್ಷಮ ಸದರಿ ಮದ್ಯವನ್ನು ಅಮಾನತುಪಡಿಸಿಕೊಳ್ಳಲಾಗಿರುತ್ತದೆ. ನಂತರ ಅಮಾನತುಪಡಿಸಿಕೊಂಡು ಮದ್ಯ ಮತ್ತು ಆರೋಪಿಯೊಂದಿಗೆ ಠಾಣೆಗೆ ಹಾಜರಾಗಿದ್ದು, ಠಾಣಾ SHO ಆದಾ ಚಾಸಾ-4 ರವರಿಗೆ ವರದಿಯನ್ನು ನೀಡಿರುತ್ತೇನೆ. ನಂತರ ಆರೋಪಿಗೆ ಕಲಂ 35(3) ಮತ್ತು (4) of BNSS ರಡಿಯಲ್ಲಿ ನೋಟೀಸನ್ನು ಜಾರಿ ಮಾಡಲಾಗಿರುತ್ತದೆ ಮತ್ತು ಆರೋಪಿಯ ಸ್ವ ಇಚ್ಛಾ ಹೇಳಿಕೆಯನ್ನು ಸಹಾ ತೆಗೆದುಕೊಳ್ಳಲಾಗಿರುತ್ತದೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಪಿ.ಎಸ್.ಐ,

ನಾಗರಾಜ್ ಬಣಕಲ್ ಪೋಲಿಸ್ ಠಾಣೆ ರವರಿಗೆ ಹಸ್ತಾಂತರಿಸಲಾಗಿರುತ್ತದೆ.

ಸಾಕ್ಷಿಯು ಮಹಜರ್ ನಲ್ಲಿ  ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಹಜರ್ ನ್ನು ನಿಪಿ-1 ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಫೋಟೋದಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಬಿಳಿ  ಬಟ್ಟೆಯಲ್ಲಿ ಕಟ್ಟಿರುವ ಕಪ್ಪು ಬಣ್ಣದ ಪ್ಲಾಸ್ಟಿಕ್ ಕವರ್ ನಲ್ಲಿರುವ Captain Martin Whisky ಯ 34 ಪೌಚ್‌ಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಎಂ.ಒ.1 ರಿಂದ 3 ಎಂದು ಗುರುತಿಸಲಾಯಿತು. ಸಾಕ್ಷಿಯು ಬಿಳಿ ಬಟ್ಟೆಯ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಎಂ.ಒ.1 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

<u>**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ.ಆರ್.ಹೆಚ್ ವಕೀಲರಿಂದಃ**</u>

ನಾನು ಬೆಟ್ಟಗೆರೆಗೆ ಹೋಗುವ ಮುನ್ನ ನಾನು ಬೆಟ್ಟಗೆರೆಯ ಅಕ್ಕಪಕ್ಕದ ಊರುಗಳ ಗಸ್ತಿನ ಕರ್ತವ್ಯದಲ್ಲಿ ನಿರತಳಾಗಿದ್ದೆ. ನಾನು ಸ.4.00 ರ ನಂತರ ಸದರಿ ಕರ್ತವ್ಯವನ್ನು ಮಾಡಲು ಪ್ರಾರಂಭಿಸಿದೆ. ಪ್ರಸ್ತುತ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿಯು ಸಂಜೆ ಸುಮಾರು 5.30 ರ ಗಂಟೆಗೆ ಬಂದಿರುತ್ತದೆ, ಖಚಿತವಾಗಿ ಸಮಯವನ್ನು ಹೇಳಲು ಸಾಧ್ಯವಿಲ್ಲ. ನನ್ನೊಡನೆ ದಾಳಿಯಲ್ಲಿ ಪಾಲ್ಗೊಂಡತಹ ಚಾಸಾ-5 ರಿಂದ 7 ರವರೂ ಸಹಾ ಗಸ್ತಿನ ಕರ್ತವ್ಯದಲ್ಲಿ ನಿರತರಾಗಿದ್ದರು. ನನಗೆ ಮಾಹಿತಿ ಬಂದ ನಂತರ ನಾನು ಬೆಟ್ಟಗೆರೆಗೆ ತಲುಪುವಾಗ ಸುಮಾರು ಸ.6.00 ರ ಸಮಯವಾಗಿರುತ್ತದೆ, ಸಾಕ್ಷಿಯು ಮುಂದುವರೆದು ನಾನು ಗಸ್ತಿನಲ್ಲಿದ್ದ ಸ್ಥಳದಿಂದ ಬೆಟ್ಟಗೆರೆಗೆ ಸುಮಾರು 6 ಕೀ.ಮೀ ಅಂತರವಿರುತ್ತದೆ. ದಾಳಿ ನಡೆಸುವ ಸಮಯದಲ್ಲಿ ಇಲಾಖಾ ವಾಹನವನ್ನು ಆರೋಪಿಯ ಮನೆಯಿಂದ ಸುಮಾರು 30 ಅಡಿ ಅಂತರದಲ್ಲಿ ನಿಲ್ಲಿಸಲಾಗಿರುತ್ತದೆ. ಸದರಿ ಸ್ಥಳದಿಂದ ಆರೋಪಿಯು ಮದ್ಯ ಮಾರಾಟ ಮಾಡುತ್ತಿರುವುದು ಕಂಡು ಬರುತ್ತಿತ್ತು. ಸದರಿ ಸಮಯದಲ್ಲಿ ಯಾವುದೇ ಫೋಟೋವನ್ನು ತೆಗೆಯಲಾಗಿರುವುದಿಲ್ಲ. ನಾವು ಶೋ.ಸ. ವಾರೆಂಟ ನ್ನು ತಯಾರಿಸಿರುವುದಿಲ್ಲ, ಸಾಕ್ಷಿಯು ಮುಂದುವರೆದು ನಮಗೆ ಆ ಸಮಯದಲ್ಲಿ ಕಾಲಾವಕಾಶ ಇರುವುದಿಲ್ಲ ಎಂದು ನುಡಿಯುತ್ತಾರೆ. ದಾಳಿ ನಡೆಸುವ ಮುನ್ನ ನಾವು ಸ್ವ ಅಂಗಶೋಧನೆಯನ್ನು ಮಾಡಿಕೊಂಡಿರುತ್ತೇವೆ.

ಶೋಧನಾ ಕ್ರಮವನ್ನು ಸುಮಾರು ಅರ್ಧ ಗಂಟೆ ಜರುಗಿಸಲಾಗಿರುತ್ತದೆ. ಸದರಿ ವಿಷಯವನ್ನು ನಾವು ಮಹಜರ್ ನಲ್ಲಿ ನಮೂದಿಸಿರುವುದಿಲ್ಲ. ದಿನಸಿ ಅಂಗಡಿಯ ನಾಮ ಫಲಕವನ್ನು ನಾವು ಗಮನಿಸಿರುವುದಿಲ್ಲ. ಎಂ.ಒ.3 ರ ಬ್ಯಾಚ್ ನಂಬರ್ ನನಗೆ ನೆನಪಿರುವುದಿಲ್ಲ. ಸದರಿ ಬ್ಯಾಚ್ ನಂಬರ್, ಸೀರಿಯಲ್ ನಂಬರ್ ಮತ್ತು ದಿನಾಂಕವನ್ನು ಮಹಜರ್ ನಲ್ಲಿ ನಮೂದುಮಾಡಲಾಗಿರುತ್ತದೆ. ಪಂಚರಿಗೆ ಸಂ.5.45 ರ ಸಮಯಕ್ಕೆ ನೋಟೀಸನ್ನು ಜಾರಿ ಮಾಡಿರುತ್ತೇವೆ. ಆ ಸಮಯದಲ್ಲಿ ಪಂಚರು ಬೆಟ್ಟಗೆರೆಯ ರಸ್ತೆ ಬದಿಯಲ್ಲಿ ಹಾಜರಿದ್ದರು. ನಿಪಿ-2 ನ್ನು ಸಿಬ್ಬಂದಿಯಾದ ಮಲ್ಲಿಕಾರ್ಜುನ ರವರು ತೆಗೆದಿರುತ್ತಾರೆ. ಆ ದಿನ ನಮ್ಮ ಜೊತೆಗೆ ಮ

ಲ್ಲಿಕಾರ್ಜುನ ರವರ ದಾಳಿಯಲ್ಲಿ ಬಾಗಿಯಾಗಿರುತ್ತಾರೆ. ಸದರಿಯವರ ಹೆಸರು ಸಾಕ್ಷಿಗಳ ಪಟ್ಟಿಯಲ್ಲಿ ನಮೂದಾಗಿರುವುದಿಲ್ಲ ಎಂದರೆ ಸರಿ. ನಿಪಿ-2 ರಲ್ಲಿ ಆರೋಪಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ನಿಪಿ-2 ರಲ್ಲಿ ಆರೋಪಿಯ ಉಪಸ್ತಿತಿ ಇಲ್ಲ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಎಂ.ಒ.1 ರಿಂದ 3 ರ ಫೋಟೋಗಳನ್ನು ತೆಗೆಯಲು ಯಾವುದೇ ತೊಂದರೆ ಇಲ್ಲ ಎಂದರೆ ಸಾಕ್ಷಿಯು ಅದರ ಅವಶ್ಯಕತೆ ಇರುವುದಿಲ್ಲ ಎಂದು ನುಡಿಯುತ್ತಾರೆ. ನಿಪಿ-2 ರಲ್ಲಿ ಎಂ.ಒ.1 ರಿಂದ 3 ಕಂಡುಬರುತ್ತಿಲ್ಲ ಎಂದರೆ ಸರಿ. ಆ ದಿನ ನಾವು ಆರೋಪಿಯ ಬಳಿಯಿಂದ ಎಂ.ಒ.1 ರಿಂದ 3 ನ್ನು ವಶಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ, ಈ ಪ್ರಕರಣಕ್ಕೂ, ಮುದ್ದೆಮಾಲುಗಳಿಗೂ ಒಂದಕ್ಕೊಂದು ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಸದರಿ ಎಂ.ಒ.1 ರಿಂದ 3 ನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.211/2025**

| | | |
|---|---|---|
| ಸಾಕ್ಷಿದಾರರ ಹೆಸರು | : ಗಣೇಶ್ | ಪ್ರಾಸಾ-2 |
| ತಂದೆಯ ಹೆಸರು | : ಅಣ್ಣು | ಚಾಸಾ-2 |
| ವಯಸ್ಸು | : 21 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 04.06.2025. |
| ವಾಸಸ್ಥಳ | : ಬೆಟ್ಟಗೆರೆ | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿ ಮತ್ತು ಚಾಸಾ-3 ಪರಿಚಯ ನನಗಿಲ್ಲ.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನಿಪಿ-2 ಇಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿರುತ್ತಾರೆ. ಎಂ.ಒ.1 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಎಂ.ಒ.1(ಬಿ) ಎಂದು ಗುರುತಿಸಲಾಯಿತು.

ಕಳೆದ 3 ತಿಂಗಳ ಹಿಂದೆ ಆರೋಪಿಯ ಅಂಗಡಿಯ ಬಳಿ ನಿಪಿ-1 ಕ್ಕೆ ಸಹಿಯನ್ನು ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ನಿಪಿ-1 ಕ್ಕೆ ನನ್ನನ್ನು ಹೊರತುಪಡಿಸಿ ಇತರರು ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ. ನಿಪಿ-1 ರಲ್ಲಿರುವ ಅಂಶಗಳನ್ನು ಪೋಲಿಸರು ನನಗೆ ಓದಿ ತಿಳಿಸಿರುವುದಿಲ್ಲ. ನಾನು ನಿಪಿ-1 ಕ್ಕೆ ಸಹಿ ಮಾಡುವಾಗ ರಾತ್ರಿ ಸಮಯವಾಗಿರುತ್ತದೆ. ಸದರಿ ಸಮಯದಲ್ಲಿ ಎಂ.ಒ.1 ರಿಂದ 3 ನ್ನು ನಾನು ನೋಡಿರುವುದಿಲ್ಲ. ಇದನ್ನು ಹೊರತು ಪಡಿಸಿ ಇನ್ಯಾವುದೇ ವಿಷಯ ನನಗೆ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.25.10.2024 ತಮ್ಮ ಹೇಳಿಕೆಯನ್ನು ಓದಿ ಹೇಳಲಾಗಿ ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ. ಸದರಿ ಹೇಳಿಕೆಯ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು. ಆರೋಪಿಯು ಪರಿಚಯ್ತರಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**
**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.211/2025**

| | | |
|---|---|---|
| ಸಾಕ್ಷಿದಾರರ ಹೆಸರು | : ಮುರುಗೇಶ್ | ಪ್ರಾಸಾ-3 |
| ತಂದೆಯ ಹೆಸರು | : ಕಂದಸ್ವಾಮಿ | ಚಾಸಾ-3 |
| ವಯಸ್ಸು | : 51 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 04.06.2025. |
| ವಾಸಸ್ಥಳ | : ಬೆಟ್ಟಗೆರೆ | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿ ಮತ್ತು ಚಾಸಾ-2 ಪರಿಚಯ ನನಗಿಲ್ಲ.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ನಿಪಿ-2 ಇಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಲು ನಿರಾಕರಿಸಿರುತ್ತಾರೆ.

ಕಳೆದ 4 ತಿಂಗಳ ಹಿಂದೆ ನಾನು ರಸ್ತೆಯ ಬಳಿ ನಡೆದುಕೊಂಡು ಹೋಗುತ್ತಿರುವಾಗ ನಿಪಿ-1 ಕ್ಕೆ ಸಹಿಯನ್ನು ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಎಂ.ಒ.1 ರಿಂದ 3 ನ್ನು ನೋಡಿ ಗುರುತಿಸಲು ನಿರಾಕರಿಸಿರುತ್ತಾರೆ. ನಿಪಿ-1 ಕ್ಕೆ ನನ್ನನ್ನು ಹೊರತುಪಡಿಸಿ ಇತರರು ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ. ನಾನು ನಿಪಿ-1 ಕ್ಕೆ ಸಹಿ ಮಾಡುವಾಗ ರಾತ್ರಿ ಸಮಯವಾಗಿರುತ್ತದೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.25.10.2024 ರಂದು ತಮ್ಮ ಹೇಳಿಕೆಯನ್ನು ಓದಿ ಹೇಳಲಾಗಿ ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ. ಸದರಿ ಹೇಳಿಕೆಯ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಆರೋಪಿಯು ಪರಿಚಯ್ತರಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.